# ಬೆಳಗಾವಿಯಲಿ ಚಳಿಗಾಲ ಅಧಿವೇಶನ

ಹುಬ್ಬಳ್ಳಿ: ಚಳಿಗಾಲದ ಅಧಿವೇಶನವನ್ನು ಈ ಬಾರಿ ಡಿಸೆಂಬರ್‌ನಲ್ಲಿ ಬೆಳಗಾವಿಯಲ್ಲಿ ನಡೆಸಲು ಉದ್ದೇಶಿಸಲಾಗಿದ್ದು, ಈ ಕುರಿತು ಸಿಎಂ ಹಾಗೂ ಸ್ಪೀಕರ್ ಜೊತೆ ಮಾತನಾಡಿದ್ದೇನೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಅವರು ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿ, ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಕುರಿತು 2 ವಾರಗಳ ಕಾಲ ಅಧಿವೇಶನ ನಡೆಸಲು ಚರ್ಚಿಸಲಾಗಿದೆ. ಡಿಸೆಂಬರ್ 2ನೇ ವಾರದಲ್ಲಿ ಅಧಿವೇಶನ ಆರಂಭಗೊಳ್ಳುವ ಸಾಧ್ಯತೆಯಿದೆ. ಚಳಿಗಾಲದ ಅಧಿವೇಶನಕ್ಕೂ ವಿರೋಧ ಪಕ್ಷದವರು ಸಹಕಾರ ನೀಡಬೇಕು. ಬಹಿಷ್ಕಾರ ಮಾಡದೇ ಚರ್ಚೆಯಲ್ಲಿ ಪಾಲ್ಗೊಳ್ಳುವ ಕುರಿತು ಮನವಿ ಮಾಡಲಾಗುವುದು ಎಂದರು. ಸಿಎಂ, ವಿಧಾನಸಭಾಧ್ಯಕ್ಷ ಹಾಗೂ ವಿಧಾನ ಪರಿಷತ್ ಸಭಾಪತಿ ಉತ್ತರ ಕರ್ನಾಟಕ ಭಾಗದವರೇ ಇರುವುದರಿಂದ ಈ ಭಾಗದ ಹಲವು ಸಮಸ್ಯೆಗಳಿಗೆ ಪರಿಹಾರ ದೊರೆಯುವ ನಿರೀಕ್ಷೆಯಿದೆ. ಮೂರು ವರ್ಷಗಳಿಂದ ಬೆಳಗಾವಿಯ ಸುವರ್ಣ ಸೌಧದಲ್ಲಿ ಅಧಿವೇಶನ ನಡೆದಿಲ್ಲ. ಈ ಬಾರಿ ಬೆಳಗಾವಿಯಲ್ಲಿ ಅಧಿವೇಶನ ನಡೆಯಲಿದೆ ಎಂದು ಬಸವರಾಜ ಹೊರಟ್ಟಿ ತಿಳಿಸಿದರು.


## ಸಾರ್ವಜನಿಕ ನೋಟಿಸು

ನಮ್ಮ ಪಕ್ಷಗಾರರು ನೀಡಿದ ಮಾಹಿತಿ ಮ ಅಧಿಕಾರದ ಮೇರೆಗೆ ಈ ಮೂಲಕ ಜಾರಿ ಮಾಡುವ ಸಾರ್ವಜನಿಕ ನೋಟಿಸು ಏನೆಂದರೆ, ಕಲಘಟಗಿ ತಾಲೂಕ ತಬಕದಹೊನ್ನಿಹಳ್ಳಿ ಹೋಬಳಿ, ಹಿಂಡಸಗೇರಿ ಗ್ರಾಮದ ಜಮೀನು ಸರ್ವೆ ನಂ.58ಅ, ಕ್ಷೇತ್ರ 14 ಎಕರೆ 29 ಗುಂಟೆಯನ್ನು, ಅದರ ಮಾಲೀಕರಾದ ಶ್ರೀಮತಿ


ಸಂಯುಕ್ತ ಕರ್ನಾಟಕ Thu, 07 Oct epaper.samy

# ನೂತನ ಪಿಂಚಣಿ ಯೋಜನೆ ರದ್ದು ಸಿಎಂಗೆ ಸಭಾಪತಿ ಹೊರಟ್ಟಿ ಪತ್ರ

**ಬೆಂಗಳೂರು:** ರಾಜ್ಯ ಸರ್ಕಾರ ಜಾರಿಗೊಳಿಸಲು ಉದ್ದೇಶಿಸಿರುವ ನೂತನ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಿ ನಿಶ್ಚಿತ ಪಿಂಚಣಿ ಯೋಜನೆಗೆ ಪರಿಷ್ಕೃತ ಆದೇಶ ಹೊರಡಿಸುವಂತೆ ಒತ್ತಾಯಿಸಿ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಸಿಎಂ ಬಸವರಾಜ ಬೊಮ್ಮಾಯಿ ಅವರಿಗೆ ಪತ್ರ ಬರೆದಿದ್ದಾರೆ.



ನೂತನ ಪಿಂಚಣಿ ಯೋಜನೆ ಜಾರಿಗೆ ಹಲವು ಹೋರಾಟ ನಡೆದ ಬಳಿಕ ಸರ್ಕಾರ ೨೦೧೮ರಲ್ಲಿ ಯೋಜನೆ ಜಾರಿಗೊಳಿಸಲು ಮುಖ್ಯ ಕಾರ್ಯದರ್ಶಿ ಅಧ್ಯಕ್ಷತೆಯಲ್ಲಿ ಮಾರ್ಪಾಡು ಮತ್ತು ಬದಲಾವಣೆಗೆ ಸಮಿತಿ ರಚಿಸಿ ಆದೇಶಿಸಿದೆ. ಆದರೆ ೨೦೦೬ರ ಏಪ್ರಿಲ್ ಒಂದರಿಂದ ಹೊಸದಾಗಿ ಸೇವೆಗೆ ಸೇರಿದ ೨ ಲಕ್ಷಕ್ಕೂ ಅಧಿಕ ನೌಕರರು ನಿಶ್ಚಿತ ಪಿಂಚಣಿಯಿಂದ ವಂಚಿತರಾಗುತ್ತಿದ್ದಾರೆ ಎಂದು ಹೊರಟ್ಟಿ ಮನವರಿಕೆ ಮಾಡಿಕೊಟ್ಟಿದ್ದಾರೆ.

ಹಾಗಾಗಿ ಸರ್ಕಾರ ಈ ಕೂಡಲೇ ನೂತನ ಪಿಂಚಣಿ ಯೋಜನೆ ರದ್ದುಗೊಳಿಸಿ, ನಿಶ್ಚಿತ ಪಿಂಚಣಿ ಕೊಡುವ ಬಗ್ಗೆ ಪರಿಷ್ಕೃತ ಆದೇಶ ಹೊರಡಿಸಿ, ಮೂರು ತಿಂಗಳ ಒಳಗಾಗಿ ಸಮಿತಿಯಿಂದ ವರದಿ ತರಿಸಿಕೊಂಡು ೨೦೨೨-೨೩ನೇ ಸಾಲಿನ ಮುಂಗಡಪತ್ರದಲ್ಲಿ ಅಧಿಕೃತವಾಗಿ ಘೋಷಿಸುವಂತೆಯೂ ಮುಖ್ಯಮಂತ್ರಿಗೆ ಸಭಾಪತಿಯವರು ಮನವಿ ಮಾಡಿದ್ದಾರೆ.

ಸಂಯುಕ್ತ ಕರ್ನಾಟಕ



ಚಳಿಗಾಲದ ಅಧಿವೇಶನವನ್ನು ಈ ಬಾರಿ ಡಿಸೆಂಬರ್‌ನಲ್ಲಿ ಬೆಳಗಾವಿಯಲ್ಲಿ ನಡೆಸಲು ಉದ್ದೇಶಿಸಲಾಗಿದ್ದು, ಸಿಎಂ ಹಾಗೂ ಸ್ಪೀಕರ್ ಜೊತೆ ಮಾತನಾಡಿದ್ದೇನೆ. ಉತ್ತರ ಕರ್ನಾಟಕ ಭಾಗದ ಸಮಸ್ಯೆಗಳ ಕುರಿತು 2 ವಾರಗಳ ಕಾಲ ಅಧಿವೇಶನ ನಡೆಸಲು ಚರ್ಚಿಸಲಾಗಿದೆ.

■ ಬಸವರಾಜ ಹೊರಟ್ಟಿ | ವಿಧಾನ ಪರಿಷತ್ ಸಭಾಪತಿ

ಸಂಯುಕ್ತ ಕರ್ನಾಟಕ Thu, 07 October 2021
epaper.samyukthakarnataka.com/c/63595891

# ಹಳೆ ಪಿಂಚಣಿ ವ್ಯವಸ್ಥೆ ಜಾರಿ ಅವಶ್ಯ; ಹೊರಟ್ಟಿ

ಹುಬ್ಬಳ್ಳಿ: ಹಳೆ ಪಿಂಚಣಿ ವ್ಯವಸ್ಥೆಯನ್ನೇ ಜಾರಿಗೊಳಿಸುವುದು ಅವಶ್ಯ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಅವರು ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿ, ಕೇಂದ್ರ ಸರಕಾರ ಜಾರಿಗೆ ತಂದಿರುವ ನೂತನ ಪಿಂಚಣಿ ಯೋಜನೆಯನ್ನು ರದ್ದುಪಡಿಸುವ ಅವಕಾಶ ರಾಜ್ಯ ಸರಕಾರಕ್ಕಿದೆ. ತಮಿಳುನಾಡು ಸರಕಾರ ಸಮಿತಿಯೊಂದನ್ನು ರಚನೆ ಮಾಡಿ ಹಳೆ ಪಿಂಚಣಿ ಯೋಜನೆ ಜಾರಿಗೆ ಮುಂದಾಗಿದೆ. ನಮ್ಮ ರಾಜ್ಯದಲ್ಲಿ 1.38 ಲಕ್ಷ ಶಿಕ್ಷಕರು ನೂತನ ಪಿಂಚಣಿ ಯೋಜನೆಗೊಳಪಡುತ್ತಿದ್ದು, ಅದನ್ನು ವಿರೋಧಿಸಿ ಹೋರಾಡಲು ಮುಂದಾಗಿದ್ದಾರೆ. ಹಳೆ ಪಿಂಚಣಿ ವ್ಯವಸ್ಥೆ ಜಾರಿಗೊಳಿಸಬೇಕು ಎಂದರು.

ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಬಗ್ಗೆ ಅಧಿಕಾರಿಗಳಿಗೆ, ಶಿಕ್ಷಕರಿಗೆ ಸರಿಯಾಗಿ ಮಾಹಿತಿ ಇಲ್ಲ. ತರಾತುರಿಯಿಂದ ಇದನ್ನು ಜಾರಿಗೊಳಿಸಬಾರದು. ಜಾರಿಗೂ ಮುನ್ನ ವಿಭಾಗಮಟ್ಟದಲ್ಲಿ ತಂಡಗಳನ್ನು ರಚಿಸಿ ಸೆಮಿನಾರ್‌ಗಳನ್ನು ಮಾಡಬೇಕು. ಈ ನೀತಿಯಲ್ಲಿ ಏನೆಲ್ಲ ಇದೆ ಎಂಬ ಬಗ್ಗೆ ಕಾರ್ಯಾಗಾರಗಳ ಮೂಲಕ ಜನರಿಗೆ, ಶಿಕ್ಷಕರಿಗೆ ಮನವರಿಕೆ ಮಾಡಿಕೊಡಬೇಕು. ಬಳಿಕ ಜಿಲ್ಲಾ ಮಟ್ಟದಲ್ಲೂ ಕಾರ್ಯಾಗಾರಗಳನ್ನು ಆಯೋಜಿಸಬೇಕು ಎಂದು ಸಲಹೆ ನೀಡಿದರು.

ಮಕ್ಕಳಿಗೆ ನೈತಿಕ ಶಿಕ್ಷಣ ಅತ್ಯಗತ್ಯ. ಆ ಅಂಶ ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿದೆ. ಆದ,' ತರಾತುರಿಯಿಂದ ಜಾರಿಗೊಳಿಸುವ ಬದಲು ಅದರ ಬಗ್ಗೆ ಅರಿವು ಮೂಡಿಸುವ ಮೂಲಕ ಜಾರಿಗೊಳಿಸಬೇಕು ಎಂದು ಸಲಹೆ ಮಾಡಿದರು.

ಸಂಯುಕ್ತ ಕರ್ನಾಟಕ Thu, 07 Oct
epaper.samy